## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು

## ಸಿ.ಸಿಃ 36/2017

| | | | |
|---|---|---|---|
| ಸಾಕ್ಷಿದಾರರ ಹೆಸರು | | ರವಿ | ಪ್ರಾಸಾಃ 4 |
| ತಂದೆಯ ಹೆಸರು | | ಶಿವರಾಜಪ್ಪ | ಚಾಸಾಃ 4 |
| ವಯಸ್ಸು | | 35 | |
| ಕೆಲಸ | | ವ್ಯವಸಾಯ | ಸಾ ಪ್ರ ಬೋ |
| ವಾಸ | | ಚಿಲಕಹಳ್ಳಿ ಗ್ರಾಮ | ದಿಃ 24.06.2024 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ಮಹಜರಿನಲ್ಲಿರುವ ಸಹಿಯನ್ನು ಈಗ ನೋಡಿ ಗುರುತಿಸಿದ್ದು, ಮಹಜರನ್ನು ನಿಪಿ-2 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸುಮಾರು 8 ವರ್ಷಗಳ ಹಿಂದೆ ನಾನು ಪೊಲೀಸರ ಕೋರಿಕೆಯ ಮೇರೆಗೆ ಠಾಣೆಯಲ್ಲಿ ನಿಪಿ 2 ಕ್ಕೆ ಸಹಿ ಮಾಡಿರುತ್ತೇನೆ. ನಿಪಿ 2 ರಲ್ಲಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ಪೊಲೀಸರು ನನಗೆ ಓದಿ ಹೇಳಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

( ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾನೆ. ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು )

**ಪಾಟೀ ಸವಾಲುಃ ಶ್ರೀ ಎಪಿಪಿ ಯವರಿಂದಃ**

2. ದಿನಾಂಕ 26.06.2016 ರಂದು ಕೃತ್ಯ ನಡೆದ ಸ್ಥಳದಲ್ಲಿ ನಾನು ಸ್ಥಳ ತೋರಿಸಿದ ಮೇರೆಗೆ ಚಾಸಾ-8 ಮತ್ತು 10 ರವರ ಸಮಕ್ಷಮ ಬೆಳಿಗ್ಗೆ 11.00 ರಿಂದ 11.45 ರವರೆಗೆ

ಮಹಜರ್ ಪ್ರಕ್ರಿಯೆಯನ್ನು ಜರುಗಿಸಿ ನ್ಯಾಯಾಲಯದ ಮುಂದಿರುವ ಮುದ್ದೆ ಮಾಲು-1 ಮತ್ತು 2 ರ ಕ್ರಿಕೇಟ್ ಬ್ಯಾಟುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಕುರಿತು ನಾನು ಪೊಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಎಲ್ಲಾ ಗೊತ್ತಿದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಶ್ರೀ ವಕೀಲರಿಂದ ಆರೋಪಿ ಪರವಾಗಿಃ ಏನು ಇಲ್ಲಾ**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**ಪ್ರಧಾನ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**